Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

20.04.2026 14.30 hrs

<><*<><>*><>

ಮುಖ್ಯಾಂಶಗಳು

- **ಇಂದು ವಿಶ್ವಗುರು ಬಸವಣ್ಣನವರ ಜಯಂತಿ; ಪ್ರಧಾನಿ, ಮುಖ್ಯಮಂತ್ರಿ ಸೇರಿದಂತೆ ಗಣ್ಯರಿಂದ ಗೌರವ ನಮನ**
- **ನೂತನ ಜನಗಣತಿಯ ಬಳಿಕ ಕ್ಷೇತ್ರಮರುವಿಂಗಡಣೆ ಮಾಡುವುದು ಸೂಕ್ತ- ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಮತ**
- **ಶಾಸಕ ಎನ್.ಎ.ಹ್ಯಾರಿಸ್ ನಿವಾಸ ಸೇರಿದಂತೆ ರಾಜ್ಯದ ಹಲವೆಡೆ ಇಡಿ ಅಧಿಕಾರಿಗಳಿಂದ ಶೋಧ; ಬಿಟ್‌ಕಾಯಿನ್ ವಹಿವಾಟು ಕುರಿತಂತೆ ಪರಿಶೀಲನೆ**
- **ಅಕ್ಷಯ ತೃತೀಯ ದಿನವಾದ ಇಂದು ಬಾಲ್ಯ ವಿವಾಹ ನಡೆಯದಂತೆ ಎಚ್ಚರಿಕೆ ವಹಿಸಲು ಹಾವೇರಿ ಜಿಲ್ಲಾಧಿಕಾರಿ ಸೂಚನೆ**

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಬಸವ ಜಯಂತಿ ಪ್ರಯುಕ್ತ ಬೆಂಗಳೂರಿನ ಚಾಲುಕ್ಯ ವೃತ್ತದಲ್ಲಿರುವ ಹಾಗೂ ವಿಧಾನಸೌಧದಲ್ಲಿರುವ ವಿಶ್ವಗುರು ಬಸವಣ್ಣನವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ಬಳಿಕ ಅವರು, ಮೈಸೂರಿನ ಕಲಾ ಮಂದಿರದಲ್ಲಿ ಜಿಲ್ಲಾ ಬಸವ ದಳಗಳ ಒಕ್ಕೂಟ ಆಯೋಜಿಸಿದ್ದ ಬಸವ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ, ೨೦೨೬ರ ಬಸವಶ್ರೀ ಪ್ರಶಸ್ತಿ ಪ್ರದಾನ ಮಾಡಿದರು. ಸುತ್ತೂರು ಮಠದ ಜಗದ್ಗುರು ಶಿವರಾತ್ರಿ ದೇಶೀಕೇಂದ್ರ ಮಹಾಸ್ವಾಮೀಜಿ ಅವರ ದಿವ್ಯ ಸಾನ್ನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ, ರಾಷ್ಟ್ರೀಯ ಬಸವ ಪ್ರಶಸ್ತಿ ಪುರಸ್ಕೃತ ಸಿದ್ದರಾಮ ಶರಣರು ಬೆಲ್ದಾಳ, ಸಚಿವರಾದ ಹೆಚ್.ಸಿ.ಮಹದೇವಪ್ಪ, ಶಿವರಾಜ್ ತಂಗಡಗಿ, ಶಾಸಕರಾದ ಹರೀಶ್ ಗೌಡ, ತನ್ವೀರ್ ಸೇಠ್, ಜಿ.ಟಿ.ದೇವೇಗೌಡ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು.

ದೇಶದೆಲ್ಲೆಡೆ ವಿಶ್ವಗುರು, ಜಗಜ್ಯೋತಿ ಬಸವೇಶ್ವರರ ಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ. ಬಸವ ಜಯಂತಿ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ಇಂದು ಬಸವಣ್ಣನವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಬಸವೇಶ್ವರರ ನ್ಯಾಯಯುತ ಸಮಾಜದ ದೃಷ್ಟಿಕೋನ ಮತ್ತು ಸಬಲೀಕರಣಕ್ಕಾಗಿ ಅವರ ಅಚಲ

ಪ್ರಯತ್ನ ಯಾವಾಗಲೂ ಸ್ಫೂರ್ತಿದಾಯಕವಾಗಿದೆ ಎಂದು ತಿಳಿಸಿದ್ದಾರೆ. ಜಗಜ್ಯೋತಿ ಬಸವಣ್ಣನವರ ಸಂದೇಶಗಳು ಎಂದಿಗೂ ಅನುಕರಣೀಯ ಮತ್ತು ಪ್ರೇರಣದಾಯಕವಾಗಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಬಸವ ಜಯಂತಿ ಪ್ರಯುಕ್ತ ಸಂಸತ್ ಭವನದ ಆವರಣದಲ್ಲಿರುವ ಪ್ರೇರಣಾ ಸ್ಥಳದಲ್ಲಿ ಜಗಜ್ಯೋತಿ ಬಸವೇಶ್ವರರಿಗೆ ಕೇಂದ್ರ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವರಾದ ಕಿರಣ್ ರಿಜಿಜು ಹಾಗೂ ಕೇಂದ್ರ ಸರ್ಕಾರದ ರೈಲ್ವೆ, ಜಲಶಕ್ತಿ ಖಾತೆಗಳ ರಾಜ್ಯ ಸಚಿವ ವಿ.ಸೋಮಣ್ಣ ಅವರೊಂದಿಗೆ ಪುಷ್ಪನಮನ ಅರ್ಪಿಸಿ ಅವರು ಮಾತನಾಡಿದರು. ೧೨ನೇ ಶತಮಾನದಲ್ಲಿ ಬಸವಣ್ಣನವರು ಪುರುಷ, ಸ್ತ್ರೀ ಎಂಬ ಭೇದವಿಲ್ಲದೆ ಎಲ್ಲರಿಗೂ ಸಮಾನ ಸ್ಥಾನಮಾನಗಳನ್ನು ದೊರಕಿಸಿಕೊಡುವಲ್ಲಿ ಶ್ರಮಿಸಿದರು. ಅಂತಹ ಮಹಾನ್ ಚೇತನ ಬಿಟ್ಟು ಹೋದ ಸಂದೇಶಗಳು ಮತ್ತು ಆದರ್ಶಗಳು ನಮಗೆ ದೊಡ್ಡ ಆಸ್ತಿಯಾಗಿವೆ ಎಂದು ಅವರು ತಿಳಿಸಿದರು. ಇನ್ನೊಂದೆಡೆ ಹುಬ್ಬಳ್ಳಿಯಲ್ಲಿ ಬಸವೇಶ್ವರ ಜಯಂತಿ ಅಂಗವಾಗಿ, ಇಂದಿರಾಗಾಂಧಿ ಗ್ಲಾಸ್ ಹೌಸ್‌ದಲ್ಲಿರುವ ಬಸವೇಶ್ವರ ಅವರ ಪುತ್ಥಳಿಗೆ ಮೂರು ಸಾವಿರ ಮಠದ ರಾಜಯೋಗೀಂದ್ರ ಮಹಾಸ್ವಾಮಿಗಳು ಹಾಗೂ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಶಾಸಕ ಮಹೇಶ ಟೆಂಗಿನಕಾಯಿ ಮಾಲಾರ್ಪಣೆ ಮಾಡಿದರು. ಬಳಿಕ ಮಾತನಾಡಿದ ಸಚಿವ ಪ್ರಲ್ಹಾದ್ ಜೋಶಿ, ಬಸವಣ್ಣನವರನ್ನು ಪಡೆದ ನಾವೆಲ್ಲರು ಪುಣ್ಯವಂತರು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ; ಪ್ರಲ್ಹಾದ್ ಜೋಶಿ ( ಸೆಕೆಂಡ್ಸ್)

ಬಸವಣ್ಣನ ಜನ್ಮಸ್ಥಳ ವಿಜಯಪುರ ಜಿಲ್ಲೆಯ ಬಾಗೇವಾಡಿಯ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ವಿರಕ್ತಮಠದ ಸಿದ್ದಲಿಂಗ ಮಹಾಸ್ವಾಮಿ ಷಟಸ್ಥಲ ಧ್ವಜಾರೋಹಣ ನೆರವೇರಿಸುವುದರ ಮೂಲಕ ಬಸವ ಜಯಂತಿಗೆ ಚಾಲನೆ ನೀಡಿದರು. ಬೆಂಗಳೂರು ಕೇಂದ್ರ ನಗರ ಪಾಲಿಕೆಯ ವತಿಯಿಂದ ಜಗಜ್ಯೋತಿ ಬಸವೇಶ್ವರರ ಜಯಂತಿ ಆಚರಿಸಲಾಯಿತು. ಕೇಂದ್ರ ನಗರ ಪಾಲಿಕೆಯ ಆಯುಕ್ತ ರಾಜೇಂದ್ರ ಚೋಳನ್ ಬಸವೇಶ್ವರರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಹಿನ್ನೆಲೆಯಲ್ಲಿ ಮಾದರಿ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ, ದಾವಣಗೆರೆಯಲ್ಲಿಂದು ವಿಶ್ವಗುರು ಬಸವಣ್ಣನವರ ಜಯಂತಿಯನ್ನು ಸರಳವಾಗಿ ಆಚರಿಸಲಾಯಿತು. ಬಸವಣ್ಣನವರ ನೇತೃತ್ವದಲ್ಲಿ ೮೫೦ ವರ್ಷಗಳ ಹಿಂದೆ ನಡೆದ ಶರಣ ಚಳುವಳಿಯ ಮೂಲಕ ಹುಟ್ಟಿದ ವಚನಗಳು ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಜೊತೆಗೆ ಉತ್ತಮ ವ್ಯಕ್ತಿತ್ವ ನಿರ್ಮಾಣಕ್ಕೆ ಕಾರಣವಾಗಿವೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ. ಕರ್ನಾಟಕದ ಸಾಂಸ್ಕೃತಿಕ ನಾಯಕ, ಕ್ರಾಂತಿಯೋಗಿ ಬಸವೇಶ್ವರರ ಜಯಂತಿಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿಯೂ ಆಚರಿಸಲಾಯಿತು.

<><*<><>*><>

ಮಹಿಳಾ ಮೀಸಲಾತಿ ವಿಚಾರದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ರಾಜಕೀಯ ಮಾಡುತ್ತಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದ್ದಾರೆ. ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೀಸಲಾತಿ ಜಾರಿಗೆ ನಮ್ಮ ಅಭ್ಯಂತರವಿಲ್ಲ, ಆದರೆ ಕ್ಷೇತ್ರ ಮರುವಿಂಗಡಣೆ ಪ್ರಕ್ರಿಯೆಯಲ್ಲಿ ದಕ್ಷಿಣ ಭಾರತದ ರಾಜ್ಯಗಳಿಗೆ ಅನ್ಯಾಯವಾಗಬಾರದು ಎಂದು ಅಭಿಪ್ರಾಯಪಟ್ಟಿದ್ದಾರೆ. ಜನಸಂಖ್ಯಾ ನಿಯಂತ್ರಣ ಮಾಡಿರುವ ದಕ್ಷಿಣದ ರಾಜ್ಯಗಳ ಹಿತರಕ್ಷಣೆಗೆ ಹೊಸ ಜನಗಣತಿಯ ಬಳಿಕ ಕ್ಷೇತ್ರ ಮರುವಿಂಗಡಣೆ ಮಾಡಬೇಕು ಎಂಬುದು ನಮ್ಮ ಒತ್ತಾಯವಾಗಿದೆ ಎಂದು ತಿಳಿಸಿದ್ದಾರೆ. ತಮಿಳುನಾಡಿನಲ್ಲಿ ಡಿಎಂಕೆ, ಕೇರಳದಲ್ಲಿ ಕಾಂಗ್ರೆಸ್ ಮೈತ್ರಿಕೂಟ ಜಯಗಳಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

<><*<><>*><>

ಬೆಂಗಳೂರಿನ ಶಾಂತಿನಗರ ಕಾಂಗ್ರೆಸ್ ಶಾಸಕ ಎನ್.ಎ.ಹ್ಯಾರೀಸ್ ಹಾಗೂ ಅವರ ಪುತ್ರರಾದ ಮೊಹಮ್ಮದ್ ಹ್ಯಾರೀಸ್ ನಲಪಾಡ್ ಮತ್ತು ಓಮರ್ ಫಾರುಖ್ ನಲಪಾಡ್ ಅವರ ನಿವಾಸಗಳು ಸೇರಿದಂತೆ ರಾಜ್ಯದ ಒಟ್ಟು ೧೨ ಕಡೆಗಳಲ್ಲಿ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ದಾಳಿ ನಡೆಸಿ ಶೋಧ ಕಾರ್ಯ ಕೈಗೊಂಡಿದ್ದಾರೆ. ಬಿಟ್ ಕಾಯಿನ್ ಅಕ್ರಮ ವಹಿವಾಟು ಪ್ರಕರಣದ ಪ್ರಮುಖ ಆರೋಪಿ ಶ್ರೀಕಿ ಜೊತೆ ಮೊಹಮ್ಮದ್ ಹ್ಯಾರೀಸ್ ನಲಪಾಡ್ ಹಣಕಾಸು ವಹಿವಾಟು ನಡೆಸಿದ ಹಿನ್ನೆಲೆಯಲ್ಲಿ ಇಡಿ ಅಧಿಕಾರಿಗಳು ಶೋಧಕಾರ್ಯ ಕೈಗೊಂಡಿದ್ದಾರೆ. ಬಿಟ್ ಕಾಯಿನ್ ಪ್ರಕರಣ ಪತ್ತೆಯಾಗುವುದಕ್ಕೂ ಮೊದಲ ಆರು ವರ್ಷ ಅವಧಿಯಲ್ಲಿ ನಲಪಾಡ್ ಮತ್ತು ಶ್ರೀಕಿ ಮಧ್ಯೆ ನಿರಂತರ ಹಣಕಾಸು ವ್ಯವಹಾರ ನಡೆದಿದೆ. ಬಿಟ್ ಕಾಯಿನ್ ವಹಿವಾಟಿಗೂ ಈ ಹಣಕ್ಕೂ ಸಂಬಂಧವಿದೆಯೇ ಎಂಬುದರ ಬಗ್ಗೆ ಇಡಿ ಅಧಿಕಾರಿಗಳು ತನಿಖೆ ಕೈಗೊಂಡಿದ್ದಾರೆ.

<><*<><>*><>

ಹಾವೇರಿ ಜಿಲ್ಲೆಯ ಎಲ್ಲ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ, ಅಕ್ಷಯ ತೃತೀಯ ದಿನವಾದ ಇಂದು ಯಾವುದೇ ಬಾಲ್ಯ ವಿವಾಹ ನಡೆಯದಂತೆ ಎಚ್ಚರಿಕೆ ವಹಿಸಬೇಕು ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ಸೂಚಿಸಿದ್ದಾರೆ. ಎಲ್ಲಿಯಾದರೂ ಬಾಲ್ಯ ವಿವಾಹ ನಡೆದರೆ, ಸಂಬಂಧಪಟ್ಟ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಿ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಪೋಕ್ಸೊ ಪ್ರಕರಣಗಳು ಹಾಗೂ ಬಾಲ ಗರ್ಭಿಣಿಯರ ಪ್ರಕರಣಗಳು ಹೆಚ್ಚುತ್ತಿರುವುದು ವಿಷಾದನೀಯ ಎಂದು ತಿಳಿಸಿದ್ದಾರೆ. ಗ್ರಾಮದಲ್ಲಿ ನಡೆಯುವ ಮದುವೆಗಳ ಬಗ್ಗೆ ಗ್ರಾಮ ಪಂಚಾಯಿತಿ ಸಿಬ್ಬಂದಿಗೆ ಮಾಹಿತಿ ಇದ್ದು, ಬಾಲ್ಯ ವಿವಾಹ ಕಂಡುಬಂದ ಕೂಡಲೇ ಸಂಬಂಧಪಟ್ಟವರಿಗೆ ವಿಷಯ ತಿಳಿಸಿ, ಬಾಲಕಿಯರನ್ನು ರಕ್ಷಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

<><*<><>*><>

ಹಾವೇರಿ ಜಿಲ್ಲೆಯಲ್ಲಿ ೨೦೨೫-೨೬ನೇ ಸಾಲಿನಲ್ಲಿ ೪೨ ಬಾಲ ಗರ್ಭಿಣಿಯರು ಪತ್ತೆಯಾಗಿದ್ದು, ಈ ಪೈಕಿ ೩೪ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಜಯಶ್ರೀ ಪಾಟೀಲ್ ತಿಳಿಸಿದ್ದಾರೆ. ಜಿಲ್ಲೆಯಲ್ಲಿ ೪೬ ಬಾಲ್ಯ ವಿವಾಹ ಪ್ರಕರಣಗಳನ್ನು ತಡೆಯಲಾಗಿದ್ದು, ೧೦ ಬಾಲಕಿಯರು ವಿದ್ಯಾಭ್ಯಾಸ ಮುಂದುವರೆಸಿದ್ದಾರೆ. ೩೬ ಬಾಲಕಿಯರು ಮನೆ ಕೆಲಸ, ಟೇಲರಿಂಗ್, ಕರಕುಶಲ ತರಬೇತಿ ಪಡೆಯುತ್ತಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.  ಪ್ರಾಥಮಿಕ ಮತ್ತು ಪ್ರೌಢಶಾಲೆ, ಪದವಿ ಪೂರ್ವ ಕಾಲೇಜು, ಆರೋಗ್ಯ ಕೇಂದ್ರ ವತಿಯಿಂದ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರಿಗೆ, ಸಾರ್ವಜನಿಕ ಸ್ಥಳ, ವಸತಿ ಶಾಲೆ ಸೇರಿದಂತೆ ವಿವಿಧ ಸ್ಥಳಗಳಲ್ಲಿ ಅರಿವು ಹಾಗೂ ಸಾಮರ್ಥ್ಯಾಭಿವೃದ್ಧಿ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

<><*<><>*><>

ನಾರಿ ಶಕ್ತಿ ವಂದನ್ ಕಾಯ್ದೆಗೆ ಕಾಂಗ್ರೆಸ್ ವಿರೋಧ ಮಾಡುವ ಮೂಲಕ ಭಾರತದ ೭೦ ಕೋಟಿ ಮಹಿಳೆಯರಿಗೆ ಅವಮಾನ ಮಾಡಿದೆ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದ್ದಾರೆ. ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹಿಳೆಯರಿಗೆ ರಾಜಕೀಯ ಕ್ಷೇತ್ರದಲ್ಲಿ ಮೀಸಲಾತಿ ನೀಡುವ ಡಾ.ಬಿ.ಆರ್.ಅಂಬೇಡ್ಕರ್ ಅವರ ಆಶೋತ್ತರಗಳಿಗೆ ಕಾಂಗ್ರೆಸ್ ದ್ರೋಹವೆಸಗಿದೆ ಎಂದು ದೂರಿದ್ದಾರೆ. ಇದೇ ವೇಳೆ ರಾಜ್ಯದಲ್ಲಿ ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರಿದೆ ಎಂದು ಸರ್ಕಾರದ ವಿರುದ್ಧ ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><*<><>*><>

ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲೂಕಿನ ದೊಡ್ಡ ಹರವೆ ಗ್ರಾಮದ ಬಳಿ ಕಾವೇರಿ ನದಿಯಲ್ಲಿ ಈಜಲು ಹೋದ ಇಬ್ಬರು ಯುವಕರು ನೀರಿನ ಸೆಳೆತಕ್ಕೆ ಸಿಲುಕಿ ಮೃತಪಟ್ಟಿರುವ ದಾರುಣ ಘಟನೆ ಸಂಭವಿಸಿದೆ. ಭಾನುವಾರ ಮಧ್ಯಾಹ್ನ ನಡೆದ ಈ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಘಟನೆ ಬಳಿಕ ವಿಷಯ ತಿಳಿದ ಸ್ಥಳೀಯರು ಮತ್ತು ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ಶೋಧ ಕಾರ್ಯ ಆರಂಭಿಸಿದ್ದಾರೆ. ಪ್ರಸ್ತುತ ಗಣೇಶ್ ಮೃತದೇಹ ಪತ್ತೆಯಾಗಿದ್ದು, ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ. ಆದರೆ, ನಾಪತ್ತೆಯಾಗಿರುವ ಇಮ್ರಾನ್ ಶವಕ್ಕಾಗಿ ಶೋಧ ಕಾರ್ಯ ಮುಂದುವರಿದಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**